## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 66 |
| ಸದಸ್ಯರ ಹೆಸರು | : | ಶ್ರೀ ಎಂ. ನಾಗರಾಜು (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸುವ ದಿನಾಂಕ | : | 04.12.2023 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದ ಬಹುತೇಕ ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳಲ್ಲಿ ಆಹಾರವನ್ನು ತಯಾರಿಸುವ ಸಂದರ್ಭದಲ್ಲಿ ಟೇಸ್ಟಿಂಗ್ ಪೌಡರ್ ಮತ್ತು ಅಜಿನೊಮೋಟೋದಂತಹ ಹಾನಿಕಾರಕ ಪದಾರ್ಥವನ್ನು ಬಳಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಇದನ್ನು ತಡೆಗಟ್ಟಲು ಸರ್ಕಾರ ಕೈಗೊಂಡ ಕ್ರಮಗಳೇನು; | ಬಂದಿದೆ.<br>ಅಜಿನೊಮೋಟೋ ಅಥವಾ ಮಾನೋ ಸೋಡಿಯಂ ಗ್ಲೂಟಾಮೇಟ್ ಪದಾರ್ಥವನ್ನು ಭಾರತದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರವು ನಿಷೇಧಿಸಿರುವುದಿಲ್ಲ. ಆದುದರಿಂದ ಸದರಿ ಪದಾರ್ಥವನ್ನು ಆಹಾರ ತಯಾರಿಕೆಯಲ್ಲಿ ಹೆಚ್ಚಾಗಿ ಉಪಯೋಗಿಸದಂತೆ ಹೋಟೆಲ್ ಮತ್ತು ರೆಸ್ಟೋರೆಂಟ್ ಉದ್ದಿಮೆದಾರರಿಗೆ ಅರಿವು ಮೂಡಿಸಲಾಗುತ್ತಿದೆ. |
| ಆ) | ರಾಜ್ಯದಲ್ಲಿ ಇದುವರೆಗೂ ಕಳೆದ ಮೂರು ವರ್ಷಗಳಲ್ಲಿ ಆಹಾರವನ್ನು ತಯಾರಿಸುವ ಸಂದರ್ಭದಲ್ಲಿ ಟೇಸ್ಟಿಂಗ್ ಪೌಡರ್ ಮತ್ತು ಅಜಿನೊಮೋಟೊ ಉಪಯೋಗಿಸಿದಂತಹ ಎಷ್ಟು ಹೋಟೆಲ್ ಮತ್ತು ರೆಸ್ಟೋರೆಂಟ್‌ಗಳ ಮೇಲೆ ಕ್ರಮ ಕೈಗೊಳ್ಳಲಾಗಿದೆ? (ವಿವರ ನೀಡುವುದು) | ಅಜಿನೊಮೋಟೋ ಅಥವಾ ಮಾನೋ ಸೋಡಿಯಂ ಗ್ಲೂಟಾಮೇಟ್ ಪದಾರ್ಥವನ್ನು ಭಾರತದ ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಪ್ರಾಧಿಕಾರವು ನಿಷೇಧಿಸಿಲ್ಲವಾದ್ದರಿಂದ ಸದರಿ ಪದಾರ್ಥವನ್ನು ಉಪಯೋಗಿಸುತ್ತಿರುವ ಹೋಟೆಲ್ ಮತ್ತು ರೆಸ್ಟೋರೆಂಟ್ ಉದ್ದಿಮೆದಾರರ ಮೇಲೆ ಯಾವುದೇ ಕ್ರಮಜರುಗಿಸದೇ ಇದನ್ನು ಹೆಚ್ಚಾಗಿ ಉಪಯೋಗಿಸದಂತೆ ಅರಿವು ಮೂಡಿಸಲಾಗುತ್ತಿದೆ. |

**ಕಡತ ಸಂಖ್ಯೆ: ಆಕುಕ 77 ಎಸ್.ಬಿ.ವಿ. 2023**

**(ದಿನೇಶ್ ಗುಂಡೂರಾವ್)**
**ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು**

1/12